# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 284 |
| ಸದಸ್ಯರ ಹೆಸರು | ಶ್ರೀ ಎಸ್. ರವಿ |
| ಉತ್ತರಿಸುವ ದಿನಾಂಕ | 11.12.2024 |
| ಉತ್ತರಿಸುವವರು | ಸಾರಿಗೆ ಮತ್ತು ಮುಜರಾಯಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಮುಜರಾಯಿ ಇಲಾಖೆ ವ್ಯಾಪ್ತಿಗೆ ಒಳಪಡುವ ಹಲವಾರು ಐತಿಹಾಸಿಕ ದೇವಸ್ಥಾನಗಳ ಗೋಡೆಗಳು ಬಿರುಕು ಬಿಟ್ಟಿರುವುದು, ಶಿಲ್ಪಗಳು ವಿಕೃತಿಗೊಂಡಿರುವುದು, ರಕ್ಷಣೆ ಇಲ್ಲದೇ ಸೊರಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದ ಮುಜರಾಯಿ ಇಲಾಖೆ ವ್ಯಾಪ್ತಿಗೆ ಒಳಪಡುವ ಹಲವಾರು ಐತಿಹಾಸಿಕ ದೇವಸ್ಥಾನಗಳ ಗೋಡೆಗಳು ಬಿರುಕು ಬಿಟ್ಟಿರುವುದು, ಶಿಲ್ಪಗಳು ವಿಕೃತಿಗೊಂಡಿರುವುದು, ರಕ್ಷಣೆ ಇಲ್ಲದೇ ಸೊರಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ) | ಬಂದಿದ್ದಲ್ಲಿ, ಇಂತಹ ಎಷ್ಟು ದೇವಸ್ಥಾನಗಳನ್ನು ಗುರುತಿಸಲಾಗಿದೆ ಮತ್ತು ಅವು ಯಾವುವು; ಪುನರುಜ್ಜೀವನಗೊಳ್ಳದೇ ಅವಸಾನದ ಅಂಚಿಗೆ ತಲುಪಿರುವ ದೇವಸ್ಥಾನಗಳೆಷ್ಟು? (ಸಂಪೂರ್ಣ ವಿವರ ನೀಡುವುದು) | 2022-23ನೇ ಸಾಲಿನ ಆಯವ್ಯಯದಲ್ಲಿ ಕಂದಾಯ ಇಲಾಖೆಗೆ ಸಂಬಂಧಿಸಿದಂತೆ, ನಿಗದಿಪಡಿಸಿರುವ ಮೊತ್ತದಲ್ಲಿ ಮುಜರಾಯಿ ದೇವಸ್ಥಾನಗಳ ಮೂಲಭೂತ ಸೌಕರ್ಯಗಳಿಗೆ ಕಾಯಕಲ್ಪ ಯೋಜನೆಯಡಿ ರೂ.25.00 ಕೋಟಿ ಅನುದಾನ ಒದಗಿಸಲಾಗಿರುತ್ತದೆ.<br><br>ಸರ್ಕಾರವು 2022-23ನೇ ಸಾಲಿನ ಆಯವ್ಯಯದಲ್ಲಿನ ಲೆಕ್ಕ ಶೀರ್ಷಿಕೆ: 4059-80-051-0-52 (386)ರಲ್ಲಿ ಒದಗಿಸಿರುವ ಅನುದಾನದಲ್ಲಿ ಪ್ರತಿ ಜಿಲ್ಲೆಯ ಪ್ರವರ್ಗ 'ಸಿ' ಶ್ರೇಣಿಯ ಕನಿಷ್ಟ 10 ದೇವಾಲಯಗಳಿಗೆ ತಲಾ ರೂ.5.00 ಲಕ್ಷಗಳಂತೆ, ಅನುದಾನ ನೀಡಿ ಅಭಿವೃದ್ಧಿ ಪಡಿಸಲು ಉದ್ದೇಶಿಸಲಾಗಿರುತ್ತದೆ. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| | | ಕಾಯಕಲ್ಪ ಯೋಜನೆಯಡಿ 31 ಜಿಲ್ಲೆಗಳಿಂದ ಸ್ವೀಕೃತವಾಗಿರುವ ಪ್ರಸ್ತಾವನೆಗಳಲ್ಲಿ ಒಟ್ಟು 477 ಧಾರ್ಮಿಕ ಸಂಸ್ಥೆಗಳಿಗೆ ಅನುದಾನ ಮಂಜೂರು ಮಾಡುವಂತೆ ಕೋರಲಾಗಿರುತ್ತದೆ. ಆದರೆ, 477 ಸಂಸ್ಥೆಗಳ ಪೈಕಿ 456 ಸಂಸ್ಥೆಗಳು ಅಧಿಸೂಚಿತ ಸಂಸ್ಥೆಗಳಾಗಿದ್ದು, ಉಳಿದ 21 ಸಂಸ್ಥೆಗಳು ಅಧಿಸೂಚಿತ ಸಂಸ್ಥೆಯಾಗಿರುವುದಿಲ್ಲ. |

ಸಂಖ್ಯೆ: ಕಂಇ 151 ಮುಸಪು 2024

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು